ಒಳರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದಾರೆ.

ಆ) ಕುಷ್ಠರೋಗ ಆಸ್ಪತ್ರೆ ಮಾಗಡಿ ರಸ್ತೆ. ಇದು ಕುಷ್ಠರೋಗಿಗಳ ಚಿಕಿತ್ಸೆ ಕೇಂದ್ರ ಆಗಿರುತ್ತದೆ. ಸಧ್ಯಕ್ಕೆ ಸರ್ಕಾರದ ಮಟ್ಟದಲ್ಲಿ ಈ ಪ್ರಸ್ತಾವನೆಯಿಲ್ಲದಿರುವುದರಿಂದ ಅದರ ಸಾಧಕ ಬಾಧಕಗಳ ಬಗ್ಗೆ ಪ್ರಶ್ನೆ ಉಂಟಾಗುವುದಿಲ್ಲ.

ಇ) ಈ ಕುಷ್ಠರೋಗ ಆಸ್ಪತ್ರೆಯನ್ನು ಸಾರ್ವಜನಿಕ ಆಸ್ಪತ್ರೆಯನ್ನಾಗಿ ಪರಿವರ್ತಿಸಲು ಸರ್ಕಾರದ ಮಟ್ಟದಲ್ಲಿ ಪರಿಶೀಲನೆಯಲ್ಲಿಲ್ಲ.

ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಗುಮಾಸ್ತರ ಕೊರತೆ.

೧೩೯೦(೧೬೫೬)

ಶ್ರೀ ದಿನೇಶ್ ಗುಂಡೂರಾವ್(ಗಾಂಧಿನಗರ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ ೬ ವರ್ಷಗಳಿಂದೀಚೆಗೆ ಸುಮಾರು ಒಂದು ಲಕ್ಷ ಶಿಕ್ಷಕರ ಹುದ್ದೆಗಳನ್ನು ಹಾಗೂ ಸುಮಾರು ೬೫೦ ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಿರುವುದು ನಿಜವೇ?

ಆ) ಹೊಸದಾಗಿ ಮಂಜೂರಾಗಿರುವ ಶಿಕ್ಷಕರ ಸಂಖ್ಯೆಗನುಗುಣವಾಗಿ ಹಾಗೂ ಹೊಸ ಸರ್ಕಾರಿ ಪ್ರೌಢಶಾಲೆಗಳಿಗೆ ಅಗತ್ಯವಾಗಿ ಬೇಕಾಗಿರುವ ಗುಮಾಸ್ತರ ಹುದ್ದೆಗಳನ್ನು ಮಂಜೂರು ಮಾಡಲು ಇಲಾಖೆಯು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದೆಯೇ?

ಇ) ಸಲ್ಲಿಸಿದ್ದಲ್ಲಿ ಸದರಿ ಪ್ರಸ್ತಾವನೆಯು ಸರ್ಕಾರದಲ್ಲಿ ಯಾವ ಹಂತದಲ್ಲಿದೆ?

ಈ) ಅಗತ್ಯ ಗುಮಾಸ್ತ ಸಿಬ್ಬಂದಿಯಿಲ್ಲದೆ ಸಾರ್ವಜನಿಕರಿಗೆ ಹಾಗೂ ಶಿಕ್ಷಕರಿಗೆ ಆಗುತ್ತಿರುವ ತೊಂದರೆಯನ್ನು ನಿವಾರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್.ವಿಶ್ವನಾಥ್: (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):

ಅ) ೬ ವರ್ಷಗಳಿಂದೀಚೆಗೆ ೪೭೮ ಸರ್ಕಾರಿ ಪ್ರೌಢಶಾಲೆಗಳನ್ನು ಮತ್ತು ೪೭೮೦ ಶಿಕ್ಷಕರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.

ಆ ಮತ್ತು ಇ) ಆರ್ಥಿಕ ಮಿತವ್ಯಯ ಹಾಗೂ ಸರ್ಕಾರದ ನೀತಿಯನ್ವಯ ಯಾವುದೇ ಹೊಸ ಹುದ್ದೆಗಳನ್ನು ಸೃಜಿಸಲು ಅವಕಾಶವಿರುವುದಿಲ್ಲ ಆದಾಗ್ಯೂ ಹಾಲಿ ಇರುವ ಸಿಬ್ಬಂದಿಯಿಂದಲೇ ಹೊಂದಾಣಿಕೆ ಮಾಡಿಕೊಳ್ಳಲಾಗುತ್ತಿದೆ.

ಈ) ಮೇಲಿನ ಪ್ರಶ್ನೆಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆ.

೧೩೯೧ (೧೬೫೭)

ಶ್ರೀ ದಿನೇಶ್ ಗುಂಡುರಾವ್(ಗಾಂಧಿನಗರ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ಇವುಗಳಲ್ಲಿ ಸ್ವಂತ ಕಟ್ಟಡವನ್ನು ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು;

ಆ. ಇವುಗಳಲ್ಲಿ ಎಷ್ಟು ಶಾಲೆಗಳಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು);

ಇ. ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಶೌಚಾಲಯ ನಿರ್ಮಾಣಕ್ಕಾಗಿ ಪ್ರಸ್ತುತ ಆಯವ್ಯಯದಲ್ಲಿ ಹಣವನ್ನು ನಿಗಧಿಪಡಿಸಲಾಗಿದೆಯೆ; ಹಾಗಿದ್ದಲ್ಲಿ ಜಿಲ್ಲಾವಾರು ಆಯವ್ಯಯ ಹಂಚಿಕೆ ವಿವರ ನೀಡುವುದು;

ಈ. ಪ್ರಸ್ತುತ ಸಾಲಿನಲ್ಲಿ ಎಷ್ಟು ಶಾಲೆಗಳಲ್ಲಿ ಶೌಚಾಲಯ ನಿರ್ಮಾಣ ಮಾಡಲಾಗಿದೆ; ಇದಕ್ಕಾಗಿ ವಿನಿಯೋಗಿಸಲಾಗಿರುವ ಹಣವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)?

ಶ್ರೀ ಹೆಚ್ ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ. ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಒಟ್ಟು ಸಂಖ್ಯೆ ೪೨೩೫೯

ಸ್ವಂತ ಕಟ್ಟಡವನ್ನು ಹೊಂದಿರುವ ಶಾಲೆಗಳ ಒಟ್ಟು ಸಂಖ್ಯೆ ೪೦೩೩೨